ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 20–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪೊಲೀಸ್ ಸಂಸ್ಮರಣ ದಿನಾಚರಣೆ:<br><br>ಮುಖ್ಯ ಅತಿಥಿಗಳು:<br><br>ಸಿದ್ದರಾಮಯ್ಯ,<br>ಮುಖ್ಯ ಮಂತ್ರಿಗಳು,<br>ಕರ್ನಾಟಕ ಸರ್ಕಾರ<br><br>ಅಧ್ಯಕ್ಷತೆ:<br><br>ಕೆ.ಜೆ. ಜಾರ್ಜ್,<br>ಗೃಹ ಸಚಿವರು | 21-10-2015<br>ಬುಧವಾರ<br>ಬೆಳಿಗ್ಗೆ<br>8–00 ಗಂಟೆಗೆ | ಹುತಾತ್ಮರ ಉದ್ಯಾನವನ,<br>ಸಶಸ್ತ್ರ ಮೀಸಲು ಪಡೆ ಕೇಂದ್ರಸ್ಥಾನ,<br>ಮೈಸೂರು ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ವಾರ್ತಾ ಸಚಿವರ ಸಂತಾಪ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ)

ಕನ್ನಡ ಚಿತ್ರರಂಗದ ಹಿರಿಯ ನಿರ್ದೇಶಕ, ಗಾಯಕ ಕೆ.ಎಸ್.ಎಲ್. ಸ್ವಾಮಿ (ಕಿಕ್ಕೇರಿ ಶಾಮಣ್ಣ ಲಕ್ಷ್ಮೀನಾರಾಯಣ ಸ್ವಾಮಿ) ಅವರ ನಿಧನಕ್ಕೆ ರಾಜ್ಯ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಖಾತೆ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ತ್ರೀವ ಶೋಕ ವ್ಯಕ್ತಪಡಿಸಿದ್ದಾರೆ.

ರವಿ ಎಂದೇ ಖ್ಯಾತರಾಗಿದ್ದ ಕೆ.ಎಸ್.ಎಲ್. ಸ್ವಾಮಿ ಅವರು ಕನ್ನಡ ಚಲನಚಿತ್ರ ರಂಗದ ಮತ್ತೋರ್ವ ಹಿರಿಯ ನಿರ್ದೇಶಕ ದಿವಂಗತ ಪುಟ್ಟಣ್ಣ ಕಣಗಾಲ್ ಅವರ ಒಡನಾಡಿಯಾಗಿದ್ದರು. ಕನ್ನಡದಲ್ಲಿ ತೂಗುದೀಪ ಚಿತ್ರದಿಂದ ಪ್ರಾರಂಭಿಸಿ 30 ಕ್ಕೂ ಹೆಚ್ಚು ಚಿತ್ರಗಳನ್ನು ನಿರ್ದೇಶಿಸಿದ್ದರು. ಶುಭಮಂಗಳ ಚಿತ್ರದಲ್ಲಿರುವ ಗೀತೆಯಂತೆ ನಾಗರಹೊಳೆ ಚಿತ್ರದಲ್ಲಿ ಅವರು ಹಾಡಿದ "ಇಲ್ಲೇ ಸ್ವರ್ಗ ಇಲ್ಲೇ ನರಕ" ಗೀತೆಯು ಸಹ ಜನಪ್ರಿಯಗಳಿಸಿತ್ತು. ಶ್ರೀಯುತರ ನಿಧನದಿಂದ ಚಲನಚಿತ್ರ ರಂಗವು ಬಡವಾಗಿದೆ ಹಾಗೂ ಕನ್ನಡ ಚಿತ್ರೋದ್ಯಮಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಚಿವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಪಲ್ಲವಿ:ಬಾಬು:ಜಿಪಿಆರ್.

## ವಿಕಲಚೇತನರ ಸಮಸ್ಯೆಗೆ ಸಕಾರಾತ್ಮಕ ಸ್ಪಂದನ

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ)**

ವಿಕಲಚೇತನರಿಗೆ ಅಕ್ಟೋಬರ್ 14 ರಿಂದ 17 ರವರೆಗೆ ಕರ್ನಾಟಕ ಪಂಚಾಯತ್ ವ್ಯವಸ್ಥೆಯ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಬೆಂಗಳೂರು ನಗರದ ಡಾನ್ ಬಾಸ್ಕೋ ಸಂಸ್ಥೆಯಲ್ಲಿ ಸಮ ಫೌಂಢೇಷನ್, ಮೊಬಿಲಿಟಿ ಇಂಡಿಯಾ, ಗ್ರಾಮೀಣ ಅಬ್ಯುದಯ ಸಂಸ್ಥೆ, ಮತ್ತು ಸಿ.ಬಿ.ಎಂ. ಸಂಸ್ಥೆ, ಬೆಂಗಳೂರು ಇವರ ಸಹಯೋಗದಲ್ಲಿ ನಡೆಸಲಾಯಿತು.

ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರಾದ ಕೆ.ಎಸ್. ರಾಜಣ್ಣ, ರವರು ಈ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ವಿಕಲಚೇತನರ ಪ್ರತಿನಿಧಿಗಳು ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ವಿಕಲಚೇತನರು ಎದುರಿಸುತ್ತಿರುವ ಗಂಭೀರ ಸಮಸ್ಯೆಗಳ ಬಗ್ಗೆ ಆಯುಕ್ತರೊಂದಿಗೆ ಚರ್ಚಿಸಿದ್ದು ಸದರಿ ಸಮಸ್ಯೆಗಳ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಆಯುಕ್ತರು ಅವರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಸೂಕ್ತ ಪರಿಹಾರ ಒದಗಿಸಲು ಶಿಫಾರಸ್ಸು ಮಾಡುವುದಾಗಿ ತಿಳಿಸಿದರು.

ಪಲ್ಲವಿ:ಬಾಬು:ಜಿಪಿಆರ್.

## ದೇಶದಲ್ಲಿ 13 ಲಕ್ಷ ಜನರಿಗೆ ಉದ್ಯೋಗಾವಕಾಶ : ಕೇಂದ್ರ ಸಚಿವ ಬೀರೇಂದ್ರಸಿಂಗ್

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ)**

ಗ್ರಾಮೀಣ ಪ್ರದೇಶಗಳ ಬಡತನ ರೇಖೆಗಿಂತ ಕೆಳಗೆ ಇರುವ 13 ಲಕ್ಷ ಯುವಜನರಿಗೆ ಮುಂಬರುವ ವರ್ಷದಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗುವುದು ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಬಿರೇಂದ್ರಸಿಂಗ್ ಅವರು ತಿಳಿಸಿದರು.

ಅವರು ಇಂದು ಮೈಸೂರು ರಸ್ತೆಯ ಕೆಫೆ ಕಾಫಿ ಡೇ ಯ ಗ್ಲೋಬಲ್ ವಿಲೇಜ್‌ನ ಚಾಂಪಿಯನ್ ಎಂಪ್ಲಾಯರ್ಸ್ ತರಬೇತಿ ಕೇಂದ್ರದಲ್ಲಿ ತರಬೇತಿ ಹೊಂದಿ ಉದ್ಯೋಗ ಪಡೆದುಕೊಂಡ ವಿದ್ಯಾರ್ಥಿಗಳು ಹಾಗೂ ಪೋಷಕರ ಸಮ್ಮಿಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಕೇಂದ್ರ ಸರ್ಕಾರವು 2014 ರಲ್ಲಿ ಕೌಶಲ್ಯ ತರಬೇತಿ ಕೇಂದ್ರಗಳನ್ನು ದೇಶದ 22 ರಾಜ್ಯಗಳಲ್ಲಿ ಪ್ರಾರಂಭಿಸಿದೆ. ದೇಶದ 1600 ತರಬೇತಿ ಕೇಂದ್ರಗಳಲ್ಲಿ ಸುಮಾರು 4300 ಕೋಟಿ ರೂ.ಗಳ ಯೋಜನೆಗಳನ್ನು ಜಾರಿಗೆ ತಂದಿದ್ದು, ಮುಂಬರುವ ವರ್ಷಗಳಲ್ಲಿ 13 ಲಕ್ಷ ಜನರು ಈ ತರಬೇತಿಯ ಪ್ರಯೋಜನ ಪಡೆಯಲಿದ್ದಾರೆ ಎಂದರು.

ಕೇಂದ್ರ ಸರ್ಕಾರದ ದೀನ ದಯಾಳ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಾದ ಇದು ಗ್ರಾಮೀಣ ಬಡಜನರ ಕೌಶಲ್ಯವನ್ನು ಅಭಿವೃದ್ಧಿಪಡಿಸಿ, ಅವರಿಗೆ ಉದ್ಯೋಗಾವಕಾಶ ಕಲ್ಪಿಸುವಲ್ಲಿ ಶ್ರಮಿಸುತ್ತಿದೆ. ಕರ್ನಾಟಕದಲ್ಲಿ ಕೆಫೆ ಕಾಫಿ ಡೇ ವತಿಯಿಂದ ಈ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಸಾವಿರಾರು ಜನರಿಗೆ ಉದ್ಯೋಗ ಕಲ್ಪಿಸುವಲ್ಲಿ ಯಶಸ್ಸು ಸಾಧಿಸಿರುವುದಾಗಿ ಅವರು ತಿಳಿಸಿದರು. ಕಳೆದ ವರ್ಷದಿಂದ ಈವರೆಗೆ ದೇಶದಲ್ಲಿ 1.55 ಲಕ್ಷ ಜನರು ತರಬೇತಿ ಹೊಂದಿದ್ದು, 64718 ಜನರಿಗೆ ಉದ್ಯೋಗಾವಕಾಶ ಸಿಕ್ಕಿದೆ, ಎಂದರು.

ಉತ್ತರ ಪ್ರದೇಶದ ನಂತರ ಕರ್ನಾಟಕ ಕೌಶಲ್ಯ ತರಬೇತಿಯಲ್ಲಿ ಎರಡನೇ ಸ್ಥಾನ ಪಡೆದಿದೆ. ಈ ಕೌಶಲ್ಯ ತರಬೇತಿಯು ತಯಾರಿಕಾ ಘಟಕ, ಆರೋಗ್ಯ ಸೇವೆಗಳು, ಹೀಗೆ ಹಲವು ವಲಯಗಳಲ್ಲಿ ನೀಡಲಾಗುವುದು. ತರಬೇತಿದಾರರಿಗೆ ಸಹ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಂಗವಿಕಲರಿಗೆ ಸಹ ಈ ಕೌಶಲ್ಯ ತರಬೇತಿ ನೀಡಲಾಗುವುದು.

ಕಾರ್ಯಕ್ರಮದಲ್ಲಿ ಹರಿಯಾಣದ ಸಂಸದೆ ಪ್ರೇಮಲತಾಸಿಂಗ್, ಕೇಂದ್ರ ಸರ್ಕಾರದ ಕೌಶಲ್ಯ ತರಬೇತಿಯ ಜಂಟಿ ಕಾರ್ಯದರ್ಶಿಗಳಾದ ಸಂತೋಷ್, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಗಾಯತ್ರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಂಜೀವಿನಿಯ ಐ.ಎ.ಎಸ್. ಅಧಿಕಾರಿ ಡಿ.ವಿ. ಸ್ವಾಮಿ, ಕೆಫೆ ಕಾಫಿ ಡೇ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ವೇಣು ಮಾಧವ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ತರಬೇತಿ ಹಾಗೂ ಉದ್ಯೋಗ ಪಡೆದುಕೊಂಡ ಸಾಧಕರಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಪಲ್ಲವಿ/ಕವನ/ಕೆಎಂ

ಛಾಯಾಚಿತ್ರ ಲಗತ್ತಿಸಿದೆ)

photo Caption

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರಾದ ಶ್ರೀ ಬಿರೇಂದ್ರಸಿಂಗ್ ರವರು ಇಂದು ದೀನ್ ದಯಾಳ್ ಉಪಾಧ್ಯಾಯ-ಗ್ರಾಮೀಣ ಕೌಶಲ್ಯ ಯೋಜನೆಯ ತರಬೇತಿ ಕೇಂದ್ರವಾದ ಕೆಫೆ ಕಾಫಿ ಡೇ ಸಂಸ್ಥೆಗೆ ಬೇಟಿ ನೀಡಿದರು. ನಂತರ ತರಬೇತಿ ಪಡೆಯುತ್ತಿರುವ ಯುವಕರನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

## ರಾಜ್ಯದಲ್ಲಿ ಕೃಷಿ ಮಾರಾಟ ಮತ್ತು ತೋಟಗಾರಿಕೆ ಕ್ಷೇತ್ರದ ಸುಧಾರಣೆಗಳು ರೈತಪರವಾಗಿವೆ : ಸ್ಕಾಟ್ ಸಿಂಡ್ಲರ್

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಜಾರಿಗೆ ತಂದಿರುವ ಸುಧಾರಣೆಗಳು ರೈತರಪರವಾಗಿವೆ. ಈ ವ್ಯವಸ್ಥೆ ಇಡೀ ರಾಷ್ಟ್ರಕ್ಕೆ ಉಪಯುಕ್ತವಾಗಿದೆ ಎಂದು ಅಮೆರಿಕಾ ರಾಯಭಾರ ಕಛೇರಿಯಲ್ಲಿನ ಕೃಷಿ ವ್ಯವಹಾರಗಳ ಕೌನ್ಸಿಲರ್ ಸ್ಕಾಟ್ ಸಿಂಡ್ಲರ್ ಹರ್ಷ ವ್ಯತಪಡಿಸಿದರು. ತೋಟಗಾರಿಕೆ ಮತ್ತು ಕೃಷಿ ಉತ್ಪನ್ನಗಳ ಮಾರಾಟ ಕ್ಷೇತ್ರದ ಉನ್ನತೀಕರಣಕ್ಕಾಗಿ ಹಾಗೂ ಮತ್ತಷ್ಟು ವೈಜ್ಞಾನಿಕ ತಂತ್ರಜ್ಞಾನಗಳ ಅಳವಡಿಕೆಯ ಸಂಬಂಧ ಅಮೇರಿಕ ಮತ್ತು ಕರ್ನಾಟಕ ದ್ವಿಪಕ್ಷೀಯ ಸಂಬಂಧಗಳು ಹೆಚ್ಚಲಿವೆ ಎಂದು ಅವರು ತಿಳಿಸಿದರು.

ನಿನ್ನೆ, ಅಂದರೆ ದಿನಾಂಕ: 19.10.2015 ರಂದು ಕೃಷಿ ಮಾರುಕಟ್ಟೆ ಇಲಾಖೆ ಮತ್ತು ತೋಟಗಾರಿಕಾ ಸಚಿವರಾದ ಶಾಮನೂರು ಶಿವಶಂಕರಪ್ಪ, ಹಿರಿಯ ಕೃಷಿ ತಜ್ಞರಾದ ಡಾ: ಸಂತೋಷ್ ಕುಮಾರ್ ಸಿಂಗ್, ಮತ್ತು ಇಲಾಖೆಯ ಉನ್ನತ ಅಧಿಕಾರಿಳನ್ನು ಸ್ಕಾಟ್ ಸಿಂಡ್ಲರ್ ಭೇಟಿ ಮಾಡಿದರು. ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ನೂತನವಾಗಿ ಜಾರಿಯಾಗಿರುವ ಆನ್‌ಲೈನ್ ಮಾರಾಟ ವ್ಯವಸ್ಥೆಯ ತಂತ್ರಜ್ಞಾನ ಮತ್ತು ತೋಟಗಾರಿಕೆ ಇಲಾಖೆಯಲ್ಲಿ ಆವಿಷ್ಕಾರಗಳ ಅಧ್ಯಯನಕ್ಕಾಗಿ ಅವರು ಆಗಮಿಸಿದ್ದಾರೆ.

ರೈತರು ಮಾರಾಟಕ್ಕಾಗಿ ತಂದ ಉತ್ಪನ್ನಗಳ ಮಾರಾಟದಲ್ಲಿ ಸ್ಪರ್ಧೆಯನ್ನು ಹೆಚ್ಚಿಸುವ ಮೂಲಕ ಉತ್ತಮ ಬೆಲೆ ಒದಗಿಸಲು ಅನುಕೂಲ ಕಲ್ಪಿಸಲಾಗಿದ್ದು, ಮಾರುಕಟ್ಟೆಯ ಎಲ್ಲ ಹಂತಗಳಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸಲಾಗಿದೆ ಎಂದು ಮಾನ್ಯ ಕೃಷಿ ಮಾರುಕಟ್ಟೆ ಇಲಾಖೆ ಮತ್ತು ತೋಟಗಾರಿಕೆ ಸಚಿವ ಶ್ಯಾಮನೂರು ಶಿವಶಂಕರಪ್ಪ ರಾಜ್ಯದಲ್ಲಿ ಜಾರಿಗೆ ತಂದಿರುವ ಸುಧಾರಣೆಗಳು ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಅಳವಡಿಸಿರುವ ನೂತನ ತಂತ್ರಜ್ಞಾನಗಳ ವಿವರ ನೀಡುತ್ತಾ ತಿಳಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಆನ್‌ಲೈನ್ ವೇದಿಕೆಯ ಮೂಲಕ ವಿವಿಧ ಮಾರಾಟ ಚಟುವಟಿಕೆಗಳನ್ನು ಜಾರಿ ಮಾಡಲಾಗಿದೆ. ವರ್ತಕರಿಗೆ ಏಕರೂಪದ ಏಕೀಕೃತ ಲೈಸನ್ಸ್ ನೀಡಿಕೆ, ದೂರದ ವ್ಯಾಪಾರವನ್ನು ಉತ್ತೇಜಿಸಲು ಕೃಷಿ ಉತ್ಪನ್ನಗಳ ಗುಣ ಪರೀಕ್ಷೆ ಮತ್ತು ವರ್ಗೀಕರಣ. ಮುಂತಾದ ಗುಣಾತ್ಮಕ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ ಎಂದವರು ತಿಳಿಸಿದರು.

ರಾಷ್ಟ್ರದಲ್ಲಿಯೇ ಪ್ರಥಮ ಬಾರಿಗೆ ರಾಜ್ಯದ 75 ಪ್ರಮುಖ ಮಾರುಕಟ್ಟೆಗಳಲ್ಲಿ ಆನ್‌ಲೈನ್ ವ್ಯಾಪಾರ ವೇದಿಕೆಯನ್ನು ಕಲ್ಪಿಸಲಾಗಿದೆ ಎಂದ ಸಚಿವರು ಕಳೆದ ಒಂದು ವರ್ಷದಲ್ಲಿ ಪ್ರಾಯೋಗಿಕವಾಗಿ ಆನ್‌ಲೈನ್ ವೇದಿಕೆಯ ಮೂಲಕ ರೂ. 11000 ಕೋಟಿ ಮೌಲ್ಯದ 27 ಲಕ್ಷ ಲಾಟ್‌ಗಳನ್ನು ಅಂದರೆ 940 ಲಕ್ಷ ಕ್ವಿಂಟಾಲ್‌ಗಳಷ್ಟು ಸಂಚಿತ ಪ್ರಮಾಣದ ಕೃಷಿ ಉತ್ಪನ್ನಗಳ ವಹಿವಾಟು ನಡೆಸಲಾಗಿದೆ ಎಂದು ತಿಳಿಸಿದರು.

ವರ್ತಕರಿಗೆ ಯಾಂತ್ರಿಕವಾಗಿ ಸ್ವಚ್ಛಗೊಳಿಸಿದ ಉತ್ಪನ್ನವನ್ನು ವ್ಯಾಪಾರಕ್ಕಾಗಿ ನೀಡುವ ಉದ್ದೇಶದಿಂದ ಈಗಾಗಲೇ 7 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಸ್ವಯಂ ಚಾಲಿತ ಸ್ವಚ್ಛಗೊಳಿಸುವ, ವರ್ಗೀಕರಿಸುವ ಮತ್ತು ಪ್ಯಾಕ್ ಮಾಡುವ ಯಂತ್ರೋಪಕರಣಗಳನ್ನು ಅಳವಡಿಸಲಾಗಿದೆ. ಇದರಿಂದ ರೈತರ ಉತ್ಪನ್ನಗಳಿಗೆ ಉತ್ತಮ ಬೆಲೆ ಪಡೆಯಲು ಸಾಧ್ಯವಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈ ವ್ಯವಸ್ಥೆಯನ್ನು ಇನ್ನೂ 25 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ವಿಸ್ತರಿಸಲು ಉದ್ದೇಶಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ 50 ಪ್ರಮುಖ ಮಾರುಕಟ್ಟೆ ಸಮಿತಿಗಳಲ್ಲಿ ಶುದ್ದ ಕುಡಿಯುವ ನೀರಿನ ವ್ಯವಸ್ಥೆ ಒದಗಿಸಲಾಗುತ್ತಿದೆ. ಕೃಷಿ ಉತ್ಪನ್ನಗಳ ಮಾರಾಟದಲ್ಲಿ ಭಾಗೀಯಾಗುವ ಎಲ್ಲ ಭಾಗೀದಾರರಲ್ಲಿ

ಜಾಗೃತಿಯನ್ನು ಮೂಡಿಸಲು ರಾಜ್ಯದ 55 ಮಾರುಕಟ್ಟೆ ಸಮಿತಿಗಳಲ್ಲಿ ಜಾಗೃತಿ ಕೇಂದ್ರಗಳನ್ನು ತೆರೆಯಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ. 236.00 ಕೋಟಿ ಹಾಗೂ ಆರ್.ಐ.ಡಿ.ಎಫ್. ಯೋಜನೆಯಡಿ ರೂ. 260.00 ಕೋಟಿ ವೆಚ್ಚದಲ್ಲಿ ರಾಜ್ಯದ ಎಲ್ಲ ಮಾರುಕಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ಎಂದು ಸಚಿವರು ತಿಳಿಸಿದರು

ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ, ರಾಜ್ಯದಲ್ಲಿ ಕೃಷಿ ಉತ್ಪನ್ನಗಳ ಮಾರಾಟ ವ್ಯವಸ್ಥೆಯಲ್ಲಿ ಜಾರಿಗೆ ತಂದಿರುವ ಸುಧಾರಣೆ ಮತ್ತು ತಂತ್ರಾಂಶಗಳ ಕುರಿತು ಪ್ರಾತ್ಯಕ್ಷತೆಯನ್ನು ಸಹಕಾರ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳಾದ ಮಹೇಂದ್ರ ಜೈನ್ ಮತ್ತು ಹೆಚ್ಚುವರಿ ಕಾರ್ಯದರ್ಶಿಗಳಾದ ಮನೋಜ್.ಆರ್ ವಿವರಿಸಿದರು.

ತೋಟಗಾರಿಕೆ ಇಲಾಖೆಯಲ್ಲಿ ಜಾರಿಗೆ ತಂದಿರುವ ಸುದಾರಣೆಗಳ ಕುರಿತು ಪ್ರಾತ್ಯಕ್ಷಿತೆಯನ್ನು ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೀವ್ ಚಾವ್ಲ, ನೀಡಿದರು.

ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಉಪಾಧ್ಯಕ್ಷರಾದ ಎಂ ಶರಣಬಸವನಗೌಡ, ಕೃಷಿ ಮಾರಾಟ ಇಲಾಖೆಯ ನಿರ್ದೇಶಕರಾದ ಜಿ.ಎನ್.ಶಿವಮೂರ್ತಿ, ಹೆಚ್ಚುವರಿ ನಿರ್ದೇಶಕರಾದ ಹೆಚ್.ಕೆ.ಚಂದ್ರಮೋಹನ್ ಮತ್ತು ಇನ್ನಿತರೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಪಲ್ಲವಿ

PHOTO CAPTION:

Hon'ble Minister-Counselor for Agricultural Affairs at the Embassy of the United States of America and Dr.Santosh kumar Singh,Senior Agricultural Specialist met Minister of Agricultural Marketing and Horticulture Shyamanur Shivashankarappa, at Karnataka state Agricultural Marketing Board today. The dignitaries discussed and exchanged their views about ON-LINE Marketing, new technology adopted by APMC 's, in karnataka and exploring collaboration opportunities between the United States and the state of Karnataka in the area of Agricultural marketing and horticulture ,

## ನಿರ್ದೇಶಕ ಕೆ.ಎಸ್.ಎಲ್ ಸ್ವಾಮಿ ನಿಧನ: ರಾಜೇಂದ್ರಸಿಂಗ್ ಬಾಬು ಸಂತಾಪ

**ಬೆಂಗಳೂರು, ಅಕ್ಟೋಬರ್ 20(ಕರ್ನಾಟಕ ವಾರ್ತೆ):**

**ಕನ್ನಡ ಚಿತ್ರರಂಗದ ಹಿರಿಯ ನಿರ್ದೇಶಕ ಕೆ.ಎಸ್.ಎಲ್ ಸ್ವಾಮಿ(ರವಿ) ಅವರ ನಿಧನಕ್ಕೆ ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಎಸ್.ವಿ. ರಾಜೇಂದ್ರಸಿಂಗ್ ಬಾಬು ಸಂತಾಪ ವ್ಯಕ್ತಪಡಿಸಿದ್ದಾರೆ.**

**ಕನ್ನಡ ಚಲನಚಿತ್ರ ರಂಗದಲ್ಲಿ ಕಳೆದ ನಾಲ್ಕು ದಶಕಗಳಿಂದ ನಿರಂತರವಾಗಿ ಕ್ರಿಯಾಶೀಲರಾಗಿದ್ದ ರವಿ ನನ್ನ ನೆಚ್ಚಿನ ನಿರ್ದೇಶಕರು. ಹೊಸ ಪ್ರಯೋಗಗಳ ಮೂಲಕ ಕನ್ನಡ ಚಿತ್ರಗಳಲ್ಲಿ ಚೈತನ್ಯ ತುಂಬಿದವರು. ಸಂಗೀತ, ಸಾಹಿತ್ಯ, ಛಾಯಾಗ್ರಹಣ ಹಾಗೂ ಪರಂಪರೆಗೆ ಹೆಚ್ಚು ಮಹತ್ವ ನೀಡುತ್ತಿದ್ದ ರವಿ ಅವರ ಚಿತ್ರಗಳೆಲ್ಲವೂ ಕನ್ನಡ ಚಲನಚಿತ್ರರಂಗದ ಮೈಲಿಗಲ್ಲುಗಳು ಎಂದು ರಾಜೇಂದ್ರಸಿಂಗ್ ಬಾಬು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.**

**ಪಲ್ಲವಿ/ಅಶ್ವಿನಿ/ಕೇ.ಮೂ/**